# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಬೀದರ ಜಿಲ್ಲೆಯ ಬೀದರ್ ತಾಲ್ಲೂಕಿನ ಬರೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಮಹ್ಮದ ರಾವೂಫ್ ಇವರ ಅಧ್ಯಕ್ಷ ಹಾಗೂ ಸದಸ್ಯತ್ವ ತೆಗೆದು ಹಾಕುವ ಕುರಿತು-ಆದೇಶ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್, ಇವರ ಪತ್ರ ಸಂಖ್ಯೆ:ಜಿಪಂಬಿ/ಗ್ರಾಪಂ/ಸಿಆರ್-68/2019-20/6947, ದಿನಾಂಕ:14.08.2019.
3) ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ಇವರ ಪತ್ರ ಸಂಖ್ಯೆ: ಕಂ/ಪ್ರಾಆಕ/ಜಿಪಂ/64/2019-20/3355, ದಿನಾಂಕ:18.11.2019.

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು 48(4) ಮತ್ತು 48(5) ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದಂತೆ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:02.02.2019 ರಲ್ಲಿ ವಹಿಸಿ, ಸರ್ಕಾರವು ಆದೇಶಿದೆ.

ಶ್ರೀ ಮಹ್ಮದ ರಾವೂಫ್ ಅಧ್ಯಕ್ಷರು, ಬರೂರು ಗ್ರಾಮ ಪಂಚಾಯಿತಿ, ಬೀದರ್ ತಾಲ್ಲೂಕು, ಬೀದರ ಜಿಲ್ಲೆ ಇವರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಶಾಮೀಲಾಗಿ 2015-16 ಮತ್ತು 2016-17ನೇ ಸಾಲಿನಲ್ಲಿ 14ನೇ ಹಣಕಾಸು ಯೋಜನೆಯಡಿ ಅನುಮೋದಿತ ಕ್ರಿಯಾ ಯೋಜನೆಯಡಿ 10 ಕಾಮಗಾರಿಗಳನ್ನು ನಿರ್ವಹಿಸದೇ ರೂ. 3,42,000/-ಗಳನ್ನು ಮತ್ತು 2016-17, 2017-18 ಮತ್ತು 2018-19ನೇ ಸಾಲಿನಲ್ಲಿ 14ನೇ ಹಣಕಾಸಿನ ಯೋಜನೆಯಡಿ ಅನುಮೋದಿತ ಕ್ರೀಯಾ ಯೋಜನೆಯ 20 ಕಾಮಗಾರಿಗಳನ್ನು ನಿರ್ವಹಿಸದೇ ರೂ. 11,51,270/-ಗಳನ್ನು ಹೀಗೆ ಒಟ್ಟು 30 ಕಾಮಗಾರಿಗಳನ್ನು ನಿರ್ವಹಿಸದೇ 14,93,270/-ಗಳನ್ನು ಯಾವ ಹುದ್ದೇಶಕ್ಕಾಗಿ ಖರ್ಚುಮಾಡಲಾಗಿದೆ ಎಂಬುದರ ಕುರಿತು ದಾಖಲೆಗಳನ್ನು ಇಡದೇ ಸರ್ಕಾರದ ಮಾರ್ಗ ಸೂಚಿಗಳನ್ನು ಅನುಸರಿಸದೆ ನಿಯಮಬಾಹಿರವಾಗಿ ಸರ್ಕಾರದ ಹಣದುರುಪಯೋಗ ಪಡಿಸಿಕೊಂಡಿರುವ ಆರೋಪದ ಮೇಲೆ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4)ರಡಿಯಲ್ಲಿ ವಿಚಾರಣೆ ನಡೆಸಿ ವಿಚಾರಣಾವರದಿಯನ್ನು ಸಲ್ಲಿಸುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಬೀದರ್ ರವರು ಪ್ರಾದೇಶಿಕ ಆಯುಕ್ತರು ಹಾಗೂ ವಿಚಾರಣಾಧಿಕಾರಿಗಳು, ಕಲಬುರಗಿ ವಿಭಾಗ, ಕಲಬುರಗಿ ಇವರಿಗೆ ವಹಿಸಿರುವುದು ಇರುತ್ತದೆ.

ಪ್ರಾದೇಶಿಕ ಆಯುಕ್ತರು ಹಾಗೂ ವಿಚಾರಣಾಧಿಕಾರಿಗಳು, ಕಲಬುರಗಿ ವಿಭಾಗ, ಕಲಬುರಗಿ ಇವರು ಬರೂರು ಗ್ರಾಮ ಪಂಚಾಯಿತಿ, ಬೀದರ್ ತಾಲ್ಲೂಕು, ಬೀದರ ಜಿಲ್ಲೆ ಇಲ್ಲಿ ನಡೆದಿರುವ ಮೇಲ್ಕಂಡ ಅವ್ಯವಹಾರಗಳ ಕುರಿತು ಶ್ರೀ ಮಹ್ಮದ ರಾವೂಫ್ ಅಧ್ಯಕ್ಷರು ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)ರಡಿ ಮತ್ತು 48(4)(5) ರನ್ವಯ ವಿಚಾರಣೆ ಜರುಗಿಸಿ, ಸದರಿಯವರನ್ನು ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಲು ಹಾಗೂ ಸದರಿ ಸದಸ್ಯತ್ವವನ್ನು ರದ್ದು ಪಡಿಸಲು ಶಿಫಾರಸ್ಸುಮಾಡಿ ಪ್ರಕರಣಕ್ಕೆ ಸಂಬಂಧ ಪಟ್ಟ ದಾಖಲಾತಿಗಳೊಂದಿಗೆ ವಿಚಾರಣಾವರದಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದಿನಾಂಕ:18-11-2019ರಂದು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರು ಹಾಗೂ ವಿಚಾರಣಾಧಿಕಾರಿಗಳು, ಕಲಬುರಗಿ ವಿಭಾಗ, ಕಲಬುರಗಿ ಇವರು ಸಲ್ಲಿಸಿರುವ ವಿಚಾರಣಾವರದಿಯಲ್ಲಿ ಶ್ರೀ ಮಹ್ಮದ ರಾವೂಫ್ ಅಧ್ಯಕ್ಷರು ಬರೂರು ಗ್ರಾಮ ಪಂಚಾಯಿತಿ, ಬೀದರ್ ತಾಲ್ಲೂಕು, ಬೀದರ ಜಿಲ್ಲೆ ಇವರ ಪ್ರಕರಣದಲ್ಲಿ ಮೇಲಿನ ಆಪಾದನೆಗಳಿಗೆ ಸಂಬಂಧಿಸಿದಂತೆ ದಿನಾಂಕ: 28-08-2019ರಲ್ಲಿ ಕಾರಣ ಕೇಳುವ ನೋಟೀಸನ್ನು ನೀಡಲಾಗಿದ್ದು ಪ್ರಾದೇಶಿಕ ಆಯುಕ್ತರ ಸಮಕ್ಷಮದಲ್ಲಿ ಲಿಖಿತ

ಹೇಳಿಕೆಯನ್ನು ಸಲ್ಲಿಸುವಂತೆ ತಿಳಿಸಿರುತ್ತಾರೆ. ಅದರಂತೆ ದಿನಾಂಕ:11-11-2019ರಂದು ಪ್ರಾದೇಶಿಕ ಆಯುಕ್ತರು ಹಾಗೂ ವಿಚಾರಣಾಧಿಕಾರಿಗಳು, ಕಲಬುರಗಿ ವಿಭಾಗ, ಕಲಬುರಗಿ ಇವರ ವಿಚಾರಣೆ ನಡೆಸಿದ್ದು ವಾದಿ ಪ್ರತಿವಾದಿಗಳ ಹೇಳಿಕೆಗಳನ್ನು ಆಲಿಸಿದ್ದು ಸದರಿ ಪ್ರಕರಣದಲ್ಲಿ ಮೇಲೆ ತಿಳಿಸಿರುವ ಸರ್ಕಾರದ ಅನುದಾನವನ್ನು ದುರ್ಬಳಕೆ ಮಾಡಿಕೊಂಡು ಕರ್ತವ್ಯ ಲೋಪವೆಸಗಿರುವುದರಿಂದ ಇವರ ಮೇಲಿನ ಆರೋಪವು ಸಾಬಿತಾಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ ಹಾಗೂ ಸದರಿ ಹಣವನ್ನು ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಅಧ್ಯಕ್ಷರಾದ ಶ್ರೀ ಮಹ್ಮದ ರಾವೂಫ್ ಇವರಿಂದ ವಸೂಲಾತಿಗಾಗಿ ಕ್ರಮ ಜರುಗಿಸುವುದು ಸೂಕ್ತವಾಗಿರುತ್ತದೆಂದು ವಿಚಾರಣಾವರದಿಯಲ್ಲಿ ತಿಳಿಸಿರುತ್ತಾರೆ. ಆದ್ದರಿಂದ ಸರ್ಕಾರವು ಮೇಲಿನ ಅಂಶಗಳನ್ನು ಗಮನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/38/ಗ್ರಾಪಂಅ/2020**
**ಬೆಂಗಳೂರು, ದಿನಾಂಕ:-04-02-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಬೀದರ ಜಿಲ್ಲೆ, ಬೀದರ್ ತಾಲ್ಲೂಕು, ಬರೂರು ಗ್ರಾಮ ಪಂಚಾಯಿತಿ, ಅಧ್ಯಕ್ಷರಾದ ಶ್ರೀ ಮಹ್ಮದ ರಾವೂಫ್ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರುಗಳು ನಿಯಮಗಳನ್ನು ಉಲ್ಲಂಘಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

1. ಶ್ರೀ ಮಹ್ಮದ ರಾವೂಫ್ ಅಧ್ಯಕ್ಷರು, ಬರೂರು ಗ್ರಾಮ ಪಂಚಾಯಿತಿ, ಬೀದರ್ ತಾಲ್ಲೂಕು, ಬೀದರ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಹಾಗೂ 48(5) ರನ್ವಯ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲಾಗಿದೆ.
2. ನಿಯಮಗಳನ್ನು ಉಲ್ಲಂಘಿಸಿ ಸರ್ಕಾರದ ಅನುದಾನವನ್ನು ದುರ್ಬಳಕೆ ಮಾಡಿಕೊಂಡು ಕರ್ತವ್ಯ ಲೋಪವೆಸಗಿರುವ ಸಂಬಂಧಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬೀದರ್ ಜಿಲ್ಲೆ ಇವರಿಗೆ ಸೂಚಿಸಲಾಗಿದೆ.
3. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 157(2) ಮತ್ತು 246(8)ರಡಿ ದುರುಪಯೋಗ ಪಡಿಸಿಕೊಂಡಿರುವ ಮೊತ್ತವನ್ನು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸಂಬಂಧಿಸಿದವರಿಂದ ವಸೂಲಿ ಮಾಡಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಬೀದರ್ ಇವರಿಗೆ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 4/2/2020
(ನವೀನ್ ಕುಮಾರ್. ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

4/2/20

ಗೆ,

1. ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು ಕಲಬುರಗಿ ವಿಭಾಗ, ಕಲಬುರಗಿ.
2. ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ, ಬೀದರ್,
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್.
4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬೀದರ್, ಬೀದರ್ ಜಿಲ್ಲೆ.

5. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬರೂರು ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯತಿ ಬೀದರ್, ಬೀದರ್ ಜಿಲ್ಲೆ, **(ಪ್ರಕರಣಕ್ಕೆ ಸಂಬಂಧಿಸಿದ ಅಧ್ಯಕ್ಷರಿಗೆ ಈ ಆದೇಶ ಜಾರಿಮಾಡಿ, ಸ್ವೀಕೃತಿ ಪಡೆದು ಸರ್ಕಾರಕ್ಕೆ ಸಲ್ಲಿಸಿಲು ಸೂಚಿಸಿದೆ).**
6. ಶ್ರೀ ಮಹ್ಮದ ರಾವೂಫ್ ಅಧ್ಯಕ್ಷರು, ಬರೂರು ಗ್ರಾಮ ಪಂಚಾಯಿತಿ, ಬೀದರ್ ತಾಲ್ಲೂಕು, ಬೀದರ ಜಿಲ್ಲೆ.
7. ಶಾಖಾ ರಕ್ಷಾ ಕಡತ/ಗಣಕಕೋಶ/ಹೆಚ್ಚುವರಿ/ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌದ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.